Akashvani : Bangalore
Regional Bulletin In Kannada
22.06.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕೃತಕ ಬುದ್ಧಿಮತ್ತೆ, ದತ್ತಾಂಶ ವಿಶ್ಲೇಷಣೆಯಿಂದ ಆರೋಗ್ಯ ಕ್ಷೇತ್ರದಲ್ಲಿ ಮಹತ್ತರ ಬದಲಾವಣೆ ಸಾಧ್ಯ- ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಮತ
- ಇನ್ನುಮುಂದೆ ಗೃಹ ಕಚೇರಿ ಕೃಷ್ಣಾದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕಾರ- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಬಿಡದಿ ಟೌನ್‌ಶಿಪ್ ವಿಚಾರ; ರೈತರ ಜೊತೆ ಮುಖ್ಯಮಂತ್ರಿ ಚರ್ಚೆಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆಹ್ವಾನ
- ಪ್ರಸ್ತಾವಿತ ಮೇಕೆದಾಟು ಯೋಜನೆ ಕುರಿತು ಜಲನ್ಯಾಯಮಂಡಳಿ ರಚನೆಗೆ ತಮಿಳುನಾಡು ವಿಧಾನಸಭೆಯಲ್ಲಿ ನಿರ್ಣಯ ಅಂಗೀಕಾರ
- ಕರಾವಳಿ ಹಾಗೂ ಒಳನಾಡು ಜಿಲ್ಲೆಗಳಲ್ಲಿ ಇಂದಿನಿಂದ ಇದೇ ೨೬ರವರೆಗೆ ಭಾರೀ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

<><*<><>*><>

ಆಧುನಿಕ ಆರೋಗ್ಯ ಕ್ಷೇತ್ರದ ಸಂಕೀರ್ಣ ಸವಾಲುಗಳನ್ನು ಎದುರಿಸಲು ಅಂತರ್‌ಶಿಸ್ತೀಯ ಸಹಯೋಗ ಮತ್ತು ಸಂಶೋಧನೆ ಅತ್ಯಗತ್ಯವಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ನಾಗಮಂಗಲದ ಬಿಜಿಎಸ್ ಸಭಾಂಗಣದಲ್ಲಿ ಆಯೋಜಿಸಿದ್ದ "ಅನುವಾದ ಸಂಶೋಧನೆಗಾಗಿ ಆರೋಗ್ಯ ವಿಜ್ಞಾನಗಳಲ್ಲಿ ಅಂತರ್‌ಶಿಸ್ತೀಯ ವಿಧಾನಗಳು" ವಿಷಯದ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, "ಇಂದಿನ ಆರೋಗ್ಯ ಕ್ಷೇತ್ರದಲ್ಲಿ ಕ್ಯಾನ್ಸರ್, ಮಧುಮೇಹ, ಹೃದ್ರೋಗ, ಸಾಂಕ್ರಾಮಿಕ ರೋಗಗಳು ಮತ್ತು ಮಾನಸಿಕ ಆರೋಗ್ಯ ಸಮಸ್ಯೆಗಳಂತಹ ಸವಾಲುಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಏಕಶಿಸ್ತೀಯ ವಿಧಾನಗಳಿಂದ ಪರಿಹಾರ ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಆರೋಗ್ಯ ಕ್ಷೇತ್ರದಲ್ಲಿ ವೈದ್ಯಕೀಯ ವಿಜ್ಞಾನ, ಜೈವಿಕ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಸಾರ್ವಜನಿಕ ಆರೋಗ್ಯ ಹಾಗೂ ಎಂಜಿನಿಯರಿಂಗ್ ಕ್ಷೇತ್ರಗಳ ಪರಿಣಿತರ ಸಹಯೋಗದಿಂದ ಮಾತ್ರ ಪರಿಣಾಮಕಾರಿ

ಪರಿಹಾರಗಳನ್ನು ಕಂಡುಹಿಡಿಯಲು ಸಾಧ್ಯ" ಎಂದು ಅಭಿಪ್ರಾಯಪಟ್ಟಿದ್ದಾರೆ. "ಕೃತಕ ಬುದ್ಧಿಮತ್ತೆ, ದತ್ತಾಂಶ ವಿಶ್ಲೇಷಣೆಯು ಆರೋಗ್ಯ ಕ್ಷೇತ್ರದಲ್ಲಿ ಮಹತ್ವದ ಪರಿವರ್ತನೆ ತರಲಿದ್ದು, ಆರಂಭಿಕ ರೋಗನಿರ್ಣಯ, ಔಷಧ ಅಭಿವೃದ್ಧಿ ಕ್ಷೇತ್ರಗಳಲ್ಲಿ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ ಎಂದು ತಿಳಿಸಿದ್ದಾರೆ.

<><*<><>*><>

ಶಾಸಕರು, ಸಾರ್ವಜನಿಕರು, ಪಕ್ಷದ ಮುಖಂಡರು, ಕಾರ್ಯಕರ್ತರು ಸೇರಿದಂತೆ ಯಾರೇ ಬಂದರು ಬೆಂಗಳೂರಿನ ಸದಾಶಿವನಗರ ನಿವಾಸದಲ್ಲಿ ಭೇಟಿ ಮಾಡುವುದಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಮಾತ್ರ ಭೇಟಿ ಮಾಡುವುದಾಗಿ ಸ್ಪಷ್ಟಪಡಿಸಿದ್ದಾರೆ. ಯಾರೊಬ್ಬರೂ ಸದಾಶಿವನಗರ ನಿವಾಸಕ್ಕೆ ಬಾರದಂತೆ ಪತ್ರಿಕಾ ಪ್ರಕಟಣೆಯ ಮೂಲಕ ಮನವಿ ಮಾಡಿದ್ದಾರೆ.

<><*<><>*><>

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆ ಮತ್ತು ಬ್ರಿಟಿಷ್ ಕೌನ್ಸಿಲ್ ಸಹಯೋಗದೊಂದಿಗೆ ಅತ್ಯುತ್ತಮ ಪ್ರತಿಭಾವಂತ ಪದವಿಪೂರ್ವ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾದ SCOUT-2.0 ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ ನೀಡಿದರು. ಉನ್ನತ ಶಿಕ್ಷಣ ಇಲಾಖೆ ಮಾಜಿ ಸಚಿವ ಹಾಗೂ ಶಾಸಕ ಡಾ.ಎಂ.ಸಿ.ಸುಧಾಕರ್, ಶಾಸಕರಾದ ವಿಜಯಾನಂದ ಕಾಶಪ್ಪನವರ್, ದರ್ಶನ್ ಧ್ರುವನಾರಾಯಣ್, ಬ್ರಿಟಿಷ್ ಡೆಪ್ಯೂಟಿ ಹೈ ಕೌನ್ಸಿಲ್ ಒವೆನ್ ರಿಚರ್ಡ್ಸ್, ಬ್ರಿಟಿಷ್ ಕೌನ್ಸಿಲ್ ದಕ್ಷಿಣ ಭಾರತ ನಿರ್ದೇಶಕಿ ಜನಕ ಪುಷ್ಪನಾಥಾನ್, ಉನ್ನತ ಶಿಕ್ಷಣ ಇಲಾಖೆ ಕಾರ್ಯದರ್ಶಿ ತುಳಸಿ ಮದ್ದಿನೇನಿ ಮತ್ತಿತರ ಅಧಿಕಾರಿಗಳು, ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

<><*<><>*><>

ಬಿಡದಿ ಟೌನ್‌ಶಿಪ್ ಕುರಿತಂತೆ, ರೈತರೊಂದಿಗೆ ಚರ್ಚೆ ನಡೆಸಲು ಬೈರಮಂಗಲಕ್ಕೆ ಆಗಮಿಸುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಕೇಂದ್ರ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಆಹ್ವಾನ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರಸ್ವಾಮಿ, ೨೦೦೬ ರಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಐದು ಕಡೆ ಟೌನ್‌ಶಿಪ್ ಯೋಜನೆ ಘೋಷಿಸಿದ್ದು ನಿಜ. ಅಂದು ಇದೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ

ವಿರೋಧಿಸಿದ್ದರು. ಈ ಯೋಜನೆಗೆ ಭೂಮಿ ನೀಡುವುದಿಲ್ಲ ಎಂಬುದಾಗಿ ೪ ಸಾವಿರದ ೫೦೦ ರೈತರು ಆಕ್ಷೇಪಣಾ ಅರ್ಜಿ ಸಲ್ಲಿಸಿದ್ದು, ಸರ್ಕಾರ ಒಂದಕ್ಕೂ ಉತ್ತರಿಸಿಲ್ಲ ಎಂದು ದಾಖಲೆ ಸಮೇತ ಬಹಿರಂಗಪಡಿಸಿದ್ದಾರೆ. ಈ ಯೋಜನೆಯ ಅಧಿಕೃತ ಕೆಲಸಗಳು ಹಾಗೂ ಕಡತ ವಿಲೇವಾರಿ, ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆಯುತ್ತಿಲ್ಲ. ಬದಲಾಗಿ ರಿಯಲ್ ಎಸ್ಟೇಟ್ ಕಚೇರಿಯಲ್ಲಿ ನಡೆಯುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

<><*<><>*><>

ಕರ್ನಾಟಕದಲ್ಲಿ ಪ್ರಸ್ತಾವಿತ ಮೇಕೆದಾಟು ಯೋಜನೆ ಕುರಿತು ತಮಿಳುನಾಡು ವಿಧಾನಸಭೆಯಲ್ಲಿ ಇಂದು ಚರ್ಚೆ ನಡೆಯಿತು.  ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ವಿರೋಧಪಕ್ಷಗಳಾದ ಎಐಎಡಿಎಂಕೆ, ಪಿಎಂಕೆ ಮತ್ತು ಸಿಪಿಎಂ, ಈ ಯೋಜನೆಯು ಕಾವೇರಿ ನೀರು ಹಂಚಿಕೆಯ ಮೇಲೆ ಪ್ರತಿಕೂಲ ಪರಿಣಾಮ ಬೀರಬಹುದು ಎಂದು ಕಳವಳ ವ್ಯಕ್ತಪಡಿಸಿವೆ. ಈ ಯೋಜನೆ, ಕರ್ನಾಟಕಕ್ಕೆ ಮಾತ್ರ ಪ್ರಯೋಜನ ನೀಡಬಹುದು ಎಂದು ಅಭಿಪ್ರಾಯಪಟ್ಟಿವೆ. ಇದೇ ವೇಳೆ, ತಮಿಳುನಾಡಿನ ಹಿತಾಸಕ್ತಿ ಕಾಪಾಡಲು, ಮೇಕೆದಾಟು ಜಲನ್ಯಾಯ ಮಂಡಳಿ ರಚನೆಯನ್ನು ಕೋರಿ ವಿಧಾನಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯವನ್ನು ಅಂಗೀಕರಿಸಿದೆ. ಚರ್ಚೆಯಲ್ಲಿ ಮಾತನಾಡಿದ ಜಲಸಂಪನ್ಮೂಲ ಸಚಿವ ಎನ್.ಆನಂದ್, ಮೇಕದಾಟು ಅಣೆಕಟ್ಟಿನ ಯೋಜನಾ ವರದಿಯನ್ನು ಅನುಮೋದಿಸಬಾರದು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

<><*<><>*><>

ಗ್ರಾಮಪಂಚಾಯಿತಿ ಮಟ್ಟದಲ್ಲಿ ಗ್ಯಾರಂಟಿ ಸಮಿತಿಗಳನ್ನು ರಚಿಸುವ ಸರ್ಕಾರದ ನಿರ್ಧಾರದ ಬಗ್ಗೆ ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ, ಗ್ರಾಮೀಣ ಭಾಗದಲ್ಲಿ ಹೆಚ್ಚುವರಿ ಗ್ಯಾರಂಟಿ ಸಮಿತಿಗಳನ್ನು ರಚಿಸುವ ಮೂಲಕ ರಾಜ್ಯದ ಖಜಾನೆಗೆ ಹೊರೆ ಹಾಕುಲು ಪ್ರಯತ್ನಿಸುತ್ತಿದೆ ಎಂದು ದೂರಿದ್ದಾರೆ. ಶಾಲಾ ವಿದ್ಯಾರ್ಥಿಗಳು ಪಠ್ಯ ಪುಸ್ತಕ ಮತ್ತು ಸಮವಸ್ತ್ರಗಳಿಗಾಗಿ ಕಾಯುತ್ತಿದ್ದಾರೆ. ಶಿಥಿಲಗೊಂಡ ತರಗತಿ, ಕೊಠಡಿಗಳನ್ನು ದುರಸ್ತಿ ಮಾಡಲು ಶಾಲೆಗಳಲ್ಲಿ ಹಣದ ಕೊರತೆಯಿದೆ. ಇಂತಹ ಪರಿಸ್ಥಿತಿಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಗ್ಯಾರಂಟಿ ಸಮಿತಿ ರಚಿಸುವ ಅವಶ್ಯಕತೆ ಇದೆಯೇ ಎಂದು ಪ್ರಶ್ನಿಸಿದ್ದಾರೆ.

<><*<><>*><>

ವಾಡಿಕೆಗಿಂತ ಕಡಿಮೆ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ, ರೈತರು ಹೆಚ್ಚು ನೀರುಣಿಸುವ ಬೆಳೆಗಳ ಬದಲಾಗಿ ಕಡಿಮೆ ಅವಧಿಯ ಹಾಗೂ ಕಡಿಮೆ ನೀರು ಬಳಸುವ ಅರೆ ನೀರಾವರಿ ಬೆಳೆ ಬೆಳೆಯುವಂತೆ ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ರೈತರಿಗೆ ಸಲಹೆ ನೀಡಿದ್ದಾರೆ. ಬಿತ್ತನೆ ಬೀಜ, ರಸಗೊಬ್ಬರ ಬೇಡಿಕೆ, ಕುಡಿಯುವ ನೀರಿನ ಸಮಸ್ಯೆ ಹಾಗೂ ಮೇವು ಲಭ್ಯತೆ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಡಿಎಪಿ ರಸಗೊಬ್ಬರ ಬದಲು ಕಾಂಪ್ಲೆಕ್ಸ್ ರಸಗೊಬ್ಬರ ಬಳಸುವಂತೆ ಸೂಚಿಸಿದ್ದಾರೆ. ಜೂನ್ ತಿಂಗಳಲ್ಲಿ ವಾಡಿಕೆಯಂತೆ ಆಗಬೇಕಾಗಿದ್ದ ಮಳೆಯಲ್ಲಿ ತೀವ್ರ ಕೊರತೆ ಕಂಡುಬಂದಿದ್ದು, ಜಿಲ್ಲೆಯಲ್ಲಿ  ಬಿತ್ತನೆ ಪ್ರಮಾಣ ಕೇವಲ ಶೇಕಡಾ ೫.೬೭ ರಷ್ಟಾಗಿದೆ. ಪೂರ್ವ ಮುಂಗಾರು ಮತ್ತು ಮುಂಗಾರುಗಳಲ್ಲಿ ಮಳೆಯ ಕೊರತೆ ಉಂಟಾಗಿದ್ದು, ಜೂನ್ ಅಂತ್ಯಕ್ಕೆ ಶೇಕಡಾ ೫೬ ರಷ್ಟು ಮಳೆ ಕೊರತೆ ಇದೆ, ಈ ಹಿನ್ನಲೆಯಲ್ಲಿ ಮೆಕ್ಕೆಜೋಳ ಮತ್ತು ಭತ್ತದಂತಹ ಅಧಿಕ ನೀರುಣಿಸುವ ಬೆಳೆಗಳ ಬದಲಾಗಿ ರಾಗಿ, ಹುರುಳಿ, ಸಜ್ಜೆ, ನವಣೆ, ಶೇಂಗಾ ಬೆಳೆಗಳನ್ನು ಅಳವಡಿಸಿಕೊಳ್ಳಲು ಅಧಿಕಾರಿಗಳು ರೈತರ ಮನವೊಲಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><*<><>*><>

ಇದೇ ೨೪ ರಂದು ಇಸ್ರೋ ಹಾಗೂ ಭಾರತದ ಬ್ರಿಕ್ಸ್ ಅಧ್ಯಕ್ಷತೆಯಡಿಯಲ್ಲಿ ಬ್ರಿಕ್ಸ್ ಬಾಹ್ಯಾಕಾಶ ಸಂಸ್ಥೆಗಳ ಮುಖ್ಯಸ್ಥರ ಸಭೆ ಆಯೋಜಿಸಲಾಗಿದೆ. ಸಭೆಯಲ್ಲಿ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಭಾಗವಹಿಸಲಿದ್ದಾರೆ.. ಬಾಹ್ಯಾಕಾಶ ಸಂಶೋಧನೆ, ಅಭಿವೃದ್ಧಿ ಕುರಿತಂತೆ ಸಭೆಯಲ್ಲಿ ಮಹತ್ವದ ಚರ್ಚೆ ನಡೆಯಲಿದೆ.

<><*<><>*><>

ಕೇಂದ್ರ ಸರ್ಕಾರದ ವಿವಿಧ ಜನಪರ ಯೋಜನೆಗಳನ್ನು ನೇರವಾಗಿ ಸಾರ್ವಜನಿಕರಿಗೆ ತಲುಪಿಸುವ ಉದ್ದೇಶದಿಂದ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ನಾಳೆ ಕೇಂದ್ರ ಸರ್ಕಾರದ ಯೋಜನೆಗಳ ಮೇಳ ಆಯೋಜಿಸಿದ್ದಾರೆ. ಈ ಮೇಳದಲ್ಲಿ ಕೇಂದ್ರ ಸರ್ಕಾರದ ಹಲವು ಪ್ರಮುಖ ಯೋಜನೆಗಳ ಕುರಿತು ಮಾಹಿತಿ ಪ್ರದರ್ಶನ ಏರ್ಪಡಿಸಲು ನಿರ್ಧರಿಸಲಾಗಿದೆ. ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಸ್ಥಳದಲ್ಲೇ ಉಪಸ್ಥಿತರಿದ್ದು ಸಾರ್ವಜನಿಕರ ಪ್ರಶ್ನೆಗಳಿಗೆ ಉತ್ತರಿಸಿ, ಯೋಜನೆಗಳ ಪ್ರಯೋಜನಗಳನ್ನು ಹೇಗೆ ಪಡೆಯಬಹುದು ಎಂಬುದರ ಕುರಿತು ಮಾರ್ಗದರ್ಶನ ನೀಡಲಿದ್ದಾರೆ. ಸಂಸದ  ಯದುವೀರ್ ಒಡೆಯರ್ ಮಾತನಾಡಿ, ಕೇಂದ್ರ ಸರ್ಕಾರದ ಅನೇಕ ಯೋಜನೆಗಳು, ಪ್ರತಿಯೊಬ್ಬ ಅರ್ಹ

ನಾಗರಿಕನಿಗೂ ತಲುಪುವುದು ಅತ್ಯಂತ ಅವಶ್ಯವಾಗಿದ್ದು, ಸಾರ್ವಜನಿಕರು ಈ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು ಪ್ರಯೋಜನ ಪಡೆಯುವಂತೆ ಮನವಿ ಮಾಡಿದ್ದಾರೆ.

<><*<><>*><>

ಬೆಂಗಳೂರು ವಾಯುಪಡೆಯ ಅರ್ಜುನ್ ಸಿಂಗ್ ಸ್ಮಾರಕ ಹಾಕಿ ಪಂದ್ಯಾವಳಿ-೨೦೨೩ರ ೭ನೇ ಆವೃತ್ತಿಯು ನಾಳೆಯಿಂದ ಜುಲೈ ೬ರವರೆಗೆ ನಡೆಯಲಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಏರ್‌ಮಾರ್ಷಲ್ ಎಸ್.ಶಿವಕುಮಾರ್, ಈ ಕ್ರೀಡಾಕೂಟವು, ಜಾಲಹಳ್ಳಿಯ ಏರ್‌ಮಾರ್ಷಲ್ ಅಮಿತ್ ಸಿಂಗ್ ಬಕ್ಷಿ ಹಾಕಿ ಕ್ರೀಡಾಂಗಣದಲ್ಲಿ ನಡೆಯಲಿದ್ದು, ೧೩ ತಂಡಗಳು ಭಾಗವಹಿಸಲಿವೆ ಎಂದು ತಿಳಿಸಿದ್ದಾರೆ. ಈ ಬಾರಿ, ಒಟ್ಟು ಬಹುಮಾನದ ಮೊತ್ತವನ್ನು ೭.೫೧ ಲಕ್ಷದಿಂದ ೨೩.೨೫ ಲಕ್ಷ ರೂಪಾಯಿಗೆ ಹೆಚ್ಚಿಸಲಾಗಿದೆ. ಚಾಂಪಿಯನ್ ತಂಡಕ್ಕೆ ಹತ್ತು ಲಕ್ಷ ರೂಪಾಯಿ ನಗದು ಬಹುಮಾನ ದೊರೆಯಲಿದ್ದು, ರನ್ನರ್ಸ್‌ಅಪ್ ತಂಡಕ್ಕೆ ೮ ಲಕ್ಷ ಬಹುಮಾನ ದೊರೆಯಲಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಏರ್ ಮಾರ್ಷಲ್, ಎಸ್.ಶಿವಕುಮಾರ್ ( ೨೩ ಸೆಕೆಂಡ್ಸ್)

<><*<><>*><>

ಇನ್ನು ಹವಾವರ್ತಾಮಾನ...

ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಿದೆ. ದಕ್ಷಿಣ ಒಳನಾಡಿನ ಕೆಲವು ಕಡೆ ಹಾಗೂ ಉತ್ತರ ಒಳನಾಡಿನ ಒಂದೆರಡು ಕಡೆ ಮಳೆಯಾಗಿದೆ. ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಮುಂದಿನ ಐದು ದಿನಗಳ ಕಾಲ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉಡುಪಿ, ಉತ್ತರ ಕನ್ನಡ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಹಲವೆಡೆ ಭಾರೀ ಮಳೆಯಾಗಲಿದೆ .ಬೆಂಗಳೂರಿನಲ್ಲಿ ಇಂದಿನಿಂದ ಇದೇ ೨೩ರವರೆಗೆ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಮುನ್ನೆಚ್ಚರಿಕೆ ನೀಡಿದ್ದಾರೆ.

<><*<><>*><>

ಮಾವಿಗೆ ಬೆಂಬಲ ಬೆಲೆ ನೀಡುವಂತೆ ಆಗ್ರಹಿಸಿ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನಲ್ಲಿ ಮಾವು ಬೆಳೆಗಾರರು ರಸ್ತೆಗೆ ಮಾವು ಸುರಿದು ಪ್ರತಿಭಟನೆ ನಡೆಸಿದರು. ಕೂಡಲೆ ಮುಖ್ಯಮಂತ್ರಿ

ಡಿ.ಕೆ.ಶಿವಕುಮಾರ್ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಬೆಂಬಲ ಬೆಲೆ ಘೋಷಿಸಬೇಕು ಎಂದು ಮಾವು ಬೆಳೆಗಾರರು ಆಗ್ರಹಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>